**ಪಿ.ಸಿ.ಆರ್. 80/2026**
**ಪಿ.ಡಬ್ಲ್ಯೂ - 01**

**ದಿನಾಂಕ: 08-05-2026 ರಂದು ಸಾಕ್ಷಿಯನ್ನು ಕರೆಯಿಸಲಾಯಿತು ಮತ್ತು ಪ್ರಮಾಣೀಕರಿಸಲಾಯಿತು.**

**ಫಿರ್ಯಾದಿದಾರರ ಸ್ವ ಪ್ರಮಾಣೀಕೃತ ಹೇಳಿಕೆ :-**

ನಾನು ಈ ದಿವಸ ನನ್ನ ಮೌಖಿಕ ಸಾಕ್ಷಿಯನ್ನು ಶಪಥ ಪತ್ರದ ರೂಪದಲ್ಲಿ ಈಗ ನ್ಯಾಯಾಲಯದಲ್ಲಿ ಸಲ್ಲಿಸುತ್ತಿದ್ದೇನೆ. ಸದರಿ ಶಪಥ ಪತ್ರದಲ್ಲಿ ಇರುವ ಸಂಗತಿಗಳನ್ನು ನಾನು ಓದಿಸಿ ತಿಳಿದುಕೊಂಡಿರುತ್ತೇನೆ ಆ ಕಾರಣ ಅವುಗಳಲ್ಲಿಯ ಅಂಶಗಳು ನಿಜವಿರುತ್ತದೆ. ಸದರಿ ಅಂಶಗಳನ್ನು ಓದಿಸಿ ತಿಳಿದುಕೊಂಡ ಮೇಲೆ ಒಪ್ಪಿ ನನ್ನ ಸಹಿ ಮಾಡಿರುತ್ತೇನೆ ಮತ್ತು ನಾನು ನನ್ನ ಮೌಖಿಕ ಸಾಕ್ಷಿಗೆ ಪೂರಕವಾಗಿ ಕೆಲವೊಂದು ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದೇನೆ ಮತ್ತು ಅವುಗಳನ್ನು ನಿಶಾನೆಪಡಿಸಲು ಕೋರುತ್ತೇನೆ.

1) ಹೆಚ್.ಡಿ.ಎಫ್.ಸಿ. ಬ್ಯಾಂಕ ಶಾಖೆ ಗುಲಬರ್ಗಾ ಚೆಕ್ ಸಂ.000001 ದಿನಾಂಕ.07-03-2026 ಮೊತ್ತ ರೂ.26,00,000/- ನೇದ್ದರ ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
2) ಐ.ಸಿ.ಐ.ಸಿ.ಐ. ಬ್ಯಾಂಕ್ ಬಸವಕಲ್ಯಾಣ ಶಾಖೆಯ ಮೆಮೋ ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು.
3) ಲಿಗಲ್ ನೋಟಿಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.
4) ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು ಗುರುತಿಸಲಾಯಿತು.
5) ಪೋಸ್ಟಲ್ ಟ್ರ್ಯಾಕ್ ಕಂನ್ಸೈಮೆಂಟ ಸ್ಟೇಟಮೆಂಟನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಆದುದ್ದರಿಂದ ದೂರಿನಲ್ಲಿ ಕೇಳಿರುವಂತೆ ಆದೇಶ ಮಾಡಬೇಕಾಗಿ ಕೋರುತ್ತೇನೆ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**(ಓ.ಹೇ.ಕೇ.ಸ.ಇದೆ)** **ಜೆ ಎಮ್ ಎಫ್ ಸಿ ನ್ಯಾಯಾಧೀಶರು**
**ಬಸವಕಲ್ಯಾಣ.**

**ಸಾಕ್ಷಿದಾರರ ಸಹಿ:-**